**ಚಾಸಾ- 8 ಪ್ರಾಸಾ-1**

**3ನೇ ಅಪರ ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ,**
**ಬೆಂಗಳೂರು ನಗರ.**
**ಸಿಸಿ.1942/2021**

| | |
|---|---|
| **ಸಾಕ್ಷಿದಾರರ ಹೆಸರು** | ನೀಲಕಂಠನ್.ಎಂ. |
| **ತಂದೆಯ ಹೆಸರು** | ಮುನಿಸ್ವಾಮಿ. |
| **ವಯಸ್ಸು** | 58 ವರ್ಷ |
| **ಉದ್ಯೋಗ** | ಪಿಐ, ಸಿಐಡಿ, ಬೆಂಗಳೂರು. |
| **ವಾಸ** | ಕೂಡ್ಲು , ಬೆಂಗಳೂರು. |
| **ಪ್ರಮಾಣೀಕರಿಸಿದ ದಿನಾಂಕ** | 01.03.2025. |

**ಮುಖ್ಯ ವಿಚಾರಣೆ : ಹಿ.ಸ ಸ. ಅಭಿಯೋಜಕರವರಿಂದ :**

ನಾನು ಜುಲೈ 2019 ರಿಂದ ಜೂನ್ 2022 ರವರೆಗೆ ಬೆಳ್ಳಂದೂರು ಪೊಲೀಸ್ ಠಾಣೆಯಲ್ಲಿ ಪಿಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ. ದಿ.12.12.2019 ರಂದು ನಾನು ಮಧ್ಯಾಹ್ನ 03.30ಕ್ಕೆ ಠಾಣೆಯಲ್ಲಿ ಇದ್ದಾಗ ದೂರುದಾರರು ಠಾಣೆಗೆ ಹಾಜರಾದ ನೀಡಿದ ಲಿಖಿತ ದೂರನ್ನು ಪಡೆದುಕೊಂಡು ಠಾಣಾ ಮೊಕದ್ದಮೆ ಸಂಖ್ಯೆ:357/2019 ರಂತೆ ಪ್ರಕರಣ ದಾಖಲು ಮಾಡಿ ಪ್ರ.ವ.ವರದಿಯನ್ನು ದಾಖಲಿಸಿ ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಅದೇ ದಿನ ಘಟನೆಯ ಸ್ಥಳಕ್ಕೆ ಭೇಟಿ ಮಾಡಿ ಚಾಸಾ-6 ಮತ್ತು 7 ರವರ ಸಮಕ್ಷಮ ಘಟನಾ ಸ್ಥಳದಲ್ಲಿ ಸಂಜೆ 04.30 ರಿಂದ 05.30 ಗಂಟೆವರೆಗೆ ಪಂಚನಾಮೆಯನ್ನು ಜರುಗಿಸಿರುತ್ತೇನೆ. ಈಗ ನೋಡುತ್ತಿರುವ ದಾಖಲೆ ನಾನು ದಿ.12.12.2019 ರಂದು ಸ್ವೀಕರಿಸಿದ ದೂರು ಆಗಿದ್ದು, ಅದರ ಮೇಲೆ ನನ್ನ ಸಹಿ ಇರುತ್ತದೆ. ಸದರಿ ದಾಖಲೆಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ. 1 ಎಂದು, ಸಾಕ್ಷಿ ಸಹಿಯನ್ನು ನಿಪಿ.1(ಎ) ಎಂದು ಗುರುತಿಸಲಾಯಿತು. ಈಗ ನೋಡುತ್ತಿರುವ ದಾಖಲೆ ನಾನು ದಾಖಲಿಸಿದ ಪ್ರ.ವ.ವರದಿಯಾಗಿದ್ದು, ಅದರ ಮೇಲೆ ನನ್ನ ಸಹಿ ಇರುತ್ತದೆ. ಸದರಿ ದಾಖಲೆಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ.2 ಎಂದು, ಸಾಕ್ಷಿ ಸಹಿಯನ್ನು ನಿಪಿ.2(ಎ) ಎಂದು ಗುರುತಿಸಲಾಯಿತು. ನಾನು ಈಗ ನೋಡುತ್ತಿರುವ ದಾಖಲೆ ಸ್ಥಳ

**ಚಾಸಾ- 8 ಪ್ರಾಸಾ-1**

ಮಹಜರ್ ಆಗಿದ್ದು, ಅದರ ಮೇಲೆ ನನ್ನ ಸಹಿ ಇರುತ್ತದೆ. ಸದರಿ ದಾಖಲೆಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ.3 ಎಂದು, ಸಾಕ್ಷಿ ಸಹಿಯನ್ನು ನಿಪಿ.3(ಎ) ಎಂದು ಗುರುತಿಸಲಾಯಿತು. ಅದೇ ದಿನ ಸ್ಥಳದಲ್ಲಿದ್ದ ಸಾಕ್ಷಿದಾರರಾದ ಚಾಸಾ-2 ಮತ್ತು 3 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ. ಅದೇ ದಿನ ಚಾಸಾ-1 ರವರಿಗೆ ದಾಖಲಾತಿಗಳನ್ನು ನೀಡುವಂತೆ ನೋಟಿಸ್ ನ್ನು ಕೊಟ್ಟಿರುತ್ತೇನೆ. ದಿ.25.12.2019ರಂದು ಆರೋಪಿ ನಿರೀಕ್ಷಣಾ ಜಾಮೀನು ಪ್ರತಿಯನ್ನು ಹಾಜರುಪಡಿಸಿದ್ದು, ಜಾಮೀನು ಪ್ರಕ್ರಿಯೇಯನ್ನು ಜರುಗಿಸಿ ಆರೋಪಿಯನ್ನು ಬಿಡುಗಡೆ ಮಾಡಿರುತ್ತೇನೆ. ದಿ.23.06.2020 ರಂದು ಮುಂದಿನ ತನಿಖೆಗಾಗಿ ಪ್ರಕರಣದ ಕಡತವನ್ನು ಚಾಸಾ-9ರವರಿಗೆ ಸಲ್ಲಿಸಿರುತ್ತೇನೆ. ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ಆರೋಪಿ ನ್ಯಾಯಾಲಯದ ಮುಂದೆ ಹಾಜರಿದ್ದು ಸಾಕ್ಷಿ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು : ಶ್ರೀಮತಿ.ಜೆ.ಎಸ್.ಹೆಚ್. ವಕೀಲರಿಂದ ಆರೋಪಿ ಪರ ವಕೀಲರು ಕಾಲವಕಾಶ ಕೋರಿದ್ದು ಸಮಂಜಸ ಕಾರಣಗಳು ಇರದೇ ಇರುವ ಕಾರಣ ಪಾಟೀಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು.)

**ಓ.ಹೇ.ಕೇ.ಸ.ಇದೆ**

**3ನೇ ಎ.ಸಿ.ಜೆ.ಎಮ್.ನ್ಯಾ.**
**ಬೆಂಗಳೂರು.**